# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 71 ಆರ್‌ಟಿಐ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ – ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ 29.06.2012.

## ಸುತ್ತೋಲೆ

ವಿಷಯ:ಮಾಹಿತಿ ಹಕ್ಕು ಅಧಿನಿಯಮ, 2005ರಡಿಯಲ್ಲಿ ಸಲ್ಲಿಸಲಾದ ಮಾಹಿತಿ ಕೋರಿಕೆ ಅರ್ಜಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ನಿಗದಿತ ಕಾಲಮಿತಿಯೊಳಗೆ ವಿಲೇ ಮಾಡುವ ಬಗ್ಗೆ.

- - -

ಕರ್ನಾಟಕ ಮಾಹಿತಿ ಆಯೋಗವು ತನ್ನ ಮುಂದೆ ದಾಖಲಾಗಿದ್ದ ಪ್ರಕರಣ ಸಂಖ್ಯೆ:ಕಮಾಆ 7306 ದೂರು 2011ರಲ್ಲಿ ( ಶ್ರೀ ಎಸ್.ಅಬ್ದುಲ್ ಹೈ ವಿರುದ್ಧ ಸಾರ್ವಜನಿಕ ಮಾಹಿತಿ ಅಧಿಕಾರಿ, ಪ್ರಧಾನ ಕಾರ್ಯದರ್ಶಿಗಳ ಕಛೇರಿ, ಕಂದಾಯ ಇಲಾಖೆ) ದಿನಾಂಕ 14.06.1012ರಂದು ನೀಡಿದ ಆದೇಶದಲ್ಲಿ (ಪ್ರತಿ ಲಗತ್ತಿಸಿದೆ) ಸಾರ್ವಜನಿಕ ಮಾಹಿತಿ ಅಧಿಕಾರಿಯು ಅರ್ಜಿದಾರರು ಕೋರಿದ್ದ ಮಾಹಿತಿಯನ್ನು ಮಾಹಿತಿ ಹಕ್ಕು ಅಧಿನಿಯಮ, 2005ರನ್ವಯ ನಿಗದಿಪಡಿಸಿರುವ ಕಾಲಮಿತಿಯೊಳಗೆ ನೀಡದೆ ವಿಳಂಬ ಮಾಡಿರುವ ಬಗ್ಗೆ ಮತ್ತು ವಿಳಂಬಕ್ಕೆ ನೀಡಿರುವ ಸಮಜಾಯಿಷಿಯನ್ನು ಒಪ್ಪದೇ ತೀವ್ರವಾಗಿ ಪರಿಗಣಿಸಿ ಮಾಹಿತಿ ಹಕ್ಕು ಅಧಿನಿಯಮ, 2005ರಡಿಯಲ್ಲಿ ಸಲ್ಲಿಸಲಾದ ಮಾಹಿತಿ ಕೋರಿಕೆ ಅರ್ಜಿಗಳನ್ನು ಮತ್ತು ಮೊದಲನೇ ಮೇಲ್ಮನವಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ನಿಗದಿತ ಕಾಲಮಿತಿಯೊಳಗೆ ವಿಲೇ ಮಾಡುವ ಬಗ್ಗೆ ಕೆಲವೊಂದು ಸೂಚನೆಗಳನ್ನು ನೀಡಿರುತ್ತದೆ.

ಮಾಹಿತಿ ಹಕ್ಕು ಅಧಿನಿಯಮ, 2005ರಡಿಯಲ್ಲಿ ಸಲ್ಲಿಸಲಾದ ಮಾಹಿತಿ ಕೋರಿಕೆ ಅರ್ಜಿಗಳನ್ನು ಮತ್ತು ಮೊದಲನೇ ಮೇಲ್ಮನವಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ನಿಗದಿತ ಕಾಲಮಿತಿಯೊಳಗೆ ವಿಲೇ ಮಾಡದಿರುವ ಬಗ್ಗೆ ಕರ್ನಾಟಕ ಮಾಹಿತಿ ಆಯೋಗವು ಗಂಭೀರವಾಗಿ ಪರಿಗಣಿಸಿದೆ. ತಮ್ಮ ಇಲಾಖೆಯಲ್ಲಿ

ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ಮಾಹಿತಿ ಕೋರಿಕೆ ಅರ್ಜಿಗಳನ್ನು ಮತ್ತು ಮೊದಲನೇ ಮೇಲ್ಮನವಿಗಳನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ನಿಗದಿತ ಕಾಲಮಿತಿಯೊಳಗೆ ವಿಲೇಗೊಳಿಸುತ್ತಿರುವ ಕುರಿತು ಈ ಕೆಳಕಂಡ ಕ್ರಮಗಳನ್ನು ತಪ್ಪದೇ ಅನುಸರಿಸಿ ಖಚಿತಪಡಿಸಿಕೊಳ್ಳತಕ್ಕದ್ದು:

1. ಮಾಹಿತಿ ಹಕ್ಕು ಅಧಿನಿಯಮ, 2005ರನ್ವಯ ನಿಗದಿಪಡಿಸಿದ ಮೂವತ್ತು (30) ದಿನಗಳ ಕಾಲಮಿತಿಯೊಳಗಾಗಿ ಮಾಹಿತಿ ನೀಡಬೇಕಾಗಿರುವುದರಿಂದ ಕನಿಷ್ಠ ಪಕ್ಷ 15 ದಿನಗಳಿಗೊಮ್ಮೆ ಬಾಕಿಯಿರುವ ಎಲ್ಲಾ ಮಾಹಿತಿ ಕೋರಿಕೆ ಅರ್ಜಿಗಳನ್ನು ವಿಮರ್ಶಿಸಿ ಕೋರಿರುವ ಮಾಹಿತಿಯನ್ನು ತ್ವರಿತವಾಗಿ ಒದಗಿಸುವ ಏರ್ಪಾಡು ಮಾಡತಕ್ಕದ್ದು;
2. ಮೇಲೆ ತಿಳಿಸಿರುವಂತೆ ಬಾಕಿಯಿರುವ ಎಲ್ಲಾ ಮೊದಲನೇ ಮೇಲ್ಮನವಿಗಳನ್ನೂ ಸಹ ನಿಗದಿತ ಕಾಲಮಿತಿಯೊಳಗೆ ವಿಲೇಯಾಗಿವೆಯೇ ಎಂದು ಕಾಲಕಾಲಕ್ಕೆ ವಿಮರ್ಶಿಸಿ ಖಚಿತಪಡಿಸಿಕೊಳ್ಳತಕ್ಕದ್ದು;

ಈ ಮೂಲಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಮೊದಲನೇ ಮೇಲ್ಮನವಿ ಪ್ರಾಧಿಕಾರಗಳು ನಿಗದಿತ ಅವಧಿಯೊಳಗೆ ಕೋರಲಾದ ಮಾಹಿತಿಯನ್ನು ನೀಡಿರುವುದಿಲ್ಲವೆಂಬ ಕಾರಣಕ್ಕಾಗಿಯೇ ಮಾಹಿತಿ ಕೋರಿಕೆದಾರರು ಕರ್ನಾಟಕ ಮಾಹಿತಿ ಆಯೋಗವನ್ನು ಸಂಪರ್ಕಿಸಲು ಅವಕಾಶ ಮಾಡಿಕೊಡಬಾರದೆಂದೂ ಸೂಚಿಸಲಾಗಿದೆ.

**(ಡಾ. ಶಾಲಿನಿ ರಜನೀಶ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ – ಜನಸ್ಪಂದನ)

ಇವರಿಗೆ.
ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

ಪ್ರತಿ:- ಮಾಹಿತಿಗಾಗಿ

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ
2. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹು ಮಹಡಿ ಕಟ್ಟಡ.